ಗುಳೇದಗುಡ್ಡ ಮತಕ್ಷೇತ್ರಕ್ಕೆ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲೆ ಮಂಜೂರಾತಿ.

43(365) ಶ್ರೀ ರಾಜಶೇಖರ ಶೀಲವಂತ ವೀರಣ್ಣ (ಗುಳೇದಗುಡ್ಡ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದರೆ, ಗುಳೇದಗುಡ್ಡ ಮತಕ್ಷೇತ್ರದಲ್ಲಿ ಪ್ರೌಢಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದರೆ, ಗುಳೇದಗುಡ್ಡ ಮತಕ್ಷೇತ್ರಕ್ಕೆ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲೆಗಳನ್ನು ಸರ್ಕಾರ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) ಇಲ್ಲ

ಆ) ಗುಳೇದಗುಡ್ಡ ಮತಕ್ಷೇತ್ರದೊಳಗೆ ಎಂಟು ಪದವಿ ಪೂರ್ವ ಕಾಲೇಜುಗಳು ಇರುವುದರಿಂದ ಮತ್ತೊಂದು ಕಾಲೇಜಿನ ಅವಶ್ಯಕತೆ ಇರುವುದಿಲ್ಲ. ಪ್ರೌಢಶಾಲೆಗೆ ಸಂಬಂಧಿಸಿದಂತೆ ಗುಳೇದಗುಡ್ಡ ಮತಕ್ಷೇತ್ರದಲ್ಲಿ ಬರುವ ಗುಡೂರು ಗ್ರಾಮದಲ್ಲಿ ಉರ್ದು ಪ್ರೌಢಶಾಲೆ ಪ್ರಾರಂಭಿಸುವ ಬಗ್ಗೆ ಪ್ರಸ್ತಾಪವಿದೆ.

ಇ) ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಮುಂದಿನ ಶೈಕ್ಷಣಿಕ ವರ್ಷದಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ನಿರ್ಧಾರ ಕೈಗೊಂಡಲ್ಲಿ ಪರಿಶೀಲಿಸಲಾಗುವುದು.

ಎಸ್.ಎಸ್.ಎಲ್.ಸಿ. ಪರೀಕ್ಷೆಯ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡುವ ಕುರಿತು.

44(164) ಶ್ರೀ ರಾಮಲಿಂಗಾರೆಡ್ಡಿ (ಜಯನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಎಸ್.ಎಸ್.ಎಲ್.ಸಿ. ಪರೀಕ್ಷೆಯ ಯಾವ ಯಾವ ಉತ್ತರ ಪತ್ರಿಕೆಗಳ ಫೋಟೋ ಪ್ರತಿಯನ್ನು ನೀಡಲು ಸರ್ಕಾರ ನಿರ್ಧರಿಸಿದೆ?